# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1370 (1618) |
| ಮಾನ್ಯ ಸದಸ್ಯರ ಹೆಸರು | ಶ್ರೀ ಗೋವಿಂದ ರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19 /12/2025 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಸಂಖ್ಯೆಯೆಷ್ಟು; ಹಾಗೂ ಇದುವರೆಗೂ ಎಷ್ಟು ಕಾರ್ಮಿಕರು ಇಲಾಖೆಯಲ್ಲಿ ನೋಂದಾಯಿಸಿಕೊಂಡಿರುತ್ತಾರೆ; | ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದರೆ ಅಂತರ ರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವಾ ಷರತ್ತು) ಕಾಯ್ದೆ, 1979 ರಡಿ ನೀಡಲಾಗಿರುವ ನೋಂದಣಿ ಮತ್ತು ಪರವಾನಗಿಗಳ ಆಧಾರದಂತೆ ಒಟ್ಟು ವಲಸೆ ಕಾರ್ಮಿಕರ ಸಂಖ್ಯೆ:**33,772** ಆಗಿರುತ್ತದೆ ಹಾಗೂ ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ನೋಂದಣಿಯಾದ ವಲಸೆ ಕಾರ್ಮಿಕರ ವಿವರ ಈ ಕೆಳಕಂಡಂತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ</u>**:<br>2023 ರ ನಂತರ ವಲಸೆ ಕಾರ್ಮಿಕರ ವಿವರಗಳನ್ನು ಮಂಡಳಿಯಲ್ಲಿ ಸ್ವೀಕರಿಸುತ್ತಿದ್ದು ಈ ಅವಧಿಯಲ್ಲಿ ಬೇರೆ ರಾಜ್ಯಗಳಿಂದ ವಲಸೆ ಬಂದು ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸ ಮಾಡುವ **34,604** ವಲಸೆ ಕಾರ್ಮಿಕರು ನೋಂದಾಯಿತರಾಗಿರುತ್ತಾರೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಲ್ಲಿ ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯನ್ನು ಹೊರತುಪಡಿಸಿ ಉಳಿದೆಲ್ಲಾ ಯೋಜನೆಗಳು ರಾಜ್ಯದ ಕಾರ್ಮಿಕರಿಗೆ ಮಾತ್ರ ಅನ್ವಯಿಸುತ್ತಿದ್ದು, ಸದರಿ ಯೋಜನೆಯ ಮಾರ್ಗಸೂಚಿಯನ್ವಯ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹೊರ ರಾಜ್ಯದ ಕಾರ್ಮಿಕರು ಸಹ |

| | | |
|---|---|---|
| | | ಯೋಜನೆಯಡಿ ನೋಂದಣಿಗೆ ಅರ್ಹರಿದ್ದು, ಈ ಯೋಜನೆಯಡಿ ಈವರೆಗೆ ಒಟ್ಟು **10,461** ಕಾರ್ಮಿಕರು ನೋಂದಣಿಯಾಗಿದ್ದು, ಅವರಲ್ಲಿ ಹೊರ ರಾಜ್ಯದ ಒಟ್ಟು **1,316** ಗಿಗ್ ಕಾರ್ಮಿಕರು ನೋಂದಣಿಯಾಗಿರುತ್ತಾರೆ. |
| ಆ) | ನೋಂದಣಿ ಮಾಡಿಕೊಂಡಿರುವ ಕಾರ್ಮಿಕರು ಯಾವ ಯಾವ ರಾಜ್ಯದಿಂದ ಬಂದಿರುತ್ತಾರೆ ಮತ್ತು ಇವರಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು: | ಇಲಾಖೆಯ ವತಿಯಿಂದ ಅಂತರ ರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವಾ ಷರತ್ತು) ಕಾಯ್ದೆ, 1979 ರಡಿ ಗುರುತಿಸಲಾದ ವಲಸೆ ಕಾರ್ಮಿಕರ ಮೂಲ ರಾಜ್ಯದ ವಿವರ ಲಭ್ಯವಿರುವುದಿಲ್ಲ. ಆದರೆ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ನೋಂದಣಿಯಾದ ವಲಸೆ ಕಾರ್ಮಿಕರು ಯಾವ ರಾಜ್ಯದವರು ಹಾಗೂ ಅವರಿಗೆ ನೀಡುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ</u>**:<br>ಈ ಮಂಡಳಿಯಲ್ಲಿ ವಿವಿಧ ರಾಜ್ಯಗಳಿಂದ ನೋಂದಣಿಯಾಗಿರುವ ವಿವರ **ಅನುಬಂಧ-1** ರಲ್ಲಿ ಒದಗಿಸಿದೆ.<br><br>ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ನೀಡಲಾಗುವ ಎಲ್ಲಾ ಸೌಲಭ್ಯಗಳನ್ನು ವಲಸೆ ಕಾರ್ಮಿಕರಿಗೂ ನೀಡಲಾಗುತ್ತಿದ್ದು ಅದರ ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ನೋಂದಾಯಿಸಿಕೊಂಡ ಹೊರ ರಾಜ್ಯದ ಕಾರ್ಮಿಕರ ವಿವರವನ್ನು **ಅನುಬಂಧ-3** ರಲ್ಲಿ ಒದಗಿಸಿದೆ.<br><br>ಈ ಕಾರ್ಮಿಕರಿಗೆ ಯೋಜನೆಯಡಿ ದೊರಕುವ ಸೌಲಭ್ಯಗಳು ಈ ಕೆಳಕಂಡಂತಿದೆ.<br><br>**ದೊರಕುವ ಸೌಲಭ್ಯಗಳು:**<br>• ಅಪಘಾದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ2.00 ಲಕ್ಷ ಹಾಗೂ ಜೀವ ವಿಮೆ ರೂ.2.00 ಲಕ್ಷ ಸೇರಿ ಒಟ್ಟು ರೂ.4.00 ಲಕ್ಷಗಳು.<br>• ಅಪಘಾದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ<br>• ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ)<br>• ಜೀವ ವಿಮಾ ರೂ.2.00 ಲಕ್ಷಗಳು. |

| | | |
|---|---|---|
| ಇ) | ಅನ್ಯರಾಜ್ಯದ ಕಾರ್ಮಿಕರ ಎದುರು ಸ್ಥಳೀಯ ಕಾರ್ಮಿಕರಿಗೆ ಕೆಲಸವಿಲ್ಲ ದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದರೆ ಇದನ್ನು ತಡೆಗಟ್ಟಲು ಸರ್ಕಾರ ತೆಗೆದು ಕೊಂಡಂತ ಕ್ರಮವೇನು: | ಕಾರ್ಮಿಕ ಇಲಾಖೆ ಮತ್ತು ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿಗಳಲ್ಲಿ ಅನ್ಯ ರಾಜ್ಯದ ಕಾರ್ಮಿಕರ ಎದುರು ಸ್ಥಳೀಯ ಕಾರ್ಮಿಕರಿಗೆ ಕೆಲಸವಿಲ್ಲ ದಂತಾಗಿರುವುದರ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ. ಹಾಗೂ ಬೇರೆ ರಾಜ್ಯದ ಕಾರ್ಮಿಕರನ್ನು ರಾಜ್ಯದಲ್ಲಿ ಕೆಲಸದಿಂದ ನಿರ್ಬಂಧಿಸಲು ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ. |
| ಈ) | ರಾಜ್ಯದಲ್ಲಿ ವಲಸೆ ಕಾರ್ಮಿಕರ ಸಂಖ್ಯೆ ಸುಮಾರು 20 ಲಕ್ಷಕ್ಕೂ ಹೆಚ್ಚಿದ್ದು, ಇದರಲ್ಲಿ ಕೇವಲ 5% ರಷ್ಟು ವಲಸಿಗರೂ ಮಾತ್ರ ನೋಂದಣಿ ಮಾಡಿಕೊಂಡಿರುವುದು ನಿಜವೇ: | ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಅಂತರ ರಾಜ್ಯ ವಲಸೆ ಕಾರ್ಮಿಕರ (ಉದ್ಯೋಗ ನಿಯಂತ್ರಣ ಮತ್ತು ಸೇವಾ ಷರತ್ತು) ಕಾಯ್ದೆ, 1979 ರಡಿ ನೀಡಲಾಗಿರುವ ನೋಂದಣಿ ಮತ್ತು ಪರವಾನಗಿಗಳ ಆಧಾರದ ಮೇಲೆ ಹಾಗೂ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿಗಳ ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳಾದ ಒಟ್ಟು ವಲಸೆ ಕಾರ್ಮಿಕರ ಸಂಖ್ಯೆ: **69692** ಗಳಾಗಿದ್ದು, ರಾಜ್ಯದಲ್ಲಿ 20 ಲಕ್ಷಕ್ಕೂ ಹೆಚ್ಚು ವಲಸೆ ಕಾರ್ಮಿಕರಿರುವ ಅಂಶದ ಬಗ್ಗೆ ನಿಖರವಾದ ಮಾಹಿತಿ ಲಭ್ಯವಿರುವುದಿಲ್ಲ. |
| ಉ) | ವಲಸಿಗರಿಂದ ನಗರ ಮತ್ತು ಗ್ರಾಮೀಣ ಭಾಗದ ಸ್ಥಳೀಯ ಕಾರ್ಮಿಕರಿಗೆ ಅನ್ಯಾಯ ವಾಗುತ್ತಿದ್ದು, ಇದಕ್ಕೆ ಕಾರಣ ಏನೆಂಬುದನ್ನು ಸರ್ಕಾರ ಚಿಂತಿಸಿದೆಯೇ: | ವಲಸೆ ಕಾರ್ಮಿಕರನ್ನು ರಾಜ್ಯದಲ್ಲಿ ಕೆಲಸಕ್ಕೆ ನಿರ್ಬಂಧಿಸಲು ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ. |
| ಊ) | ವಲಸಿಗರು ನೇಕಾರಿಕೆ, ಕೃಷಿ, ಕಟಿಂಗ್ ಶಾಪ್, ಚಾಲನೆ ಹಾಗೂ ಇನ್ನಿತರೆ ಎಲ್ಲಾ ಕೆಲಸಗಳನ್ನು ಮಾಡುತ್ತಿರುವುದರಿಂದ ರಾಜ್ಯದಲ್ಲಿರುವ ಕನ್ನಡಿಗರು ನಿರುದ್ಯೋಗಿಗಳಾಗುತ್ತಾರೆ ಎಂಬುದನ್ನು ಸರ್ಕಾರ ಗಮನಿಸಿ ದೆಯೇ? | |

**ಕಾಇ 512 ಎಲ್ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

## ಅನುಬಂಧ-01

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1618 (1370)**

| KBOCWWB Migrant Workers Report | | |
|---|---|---|
| **Sl. No.** | **State** | **Count** |
| 1 | Andaman and Nicobar Islands | 5 |
| 2 | Andhra Pradesh | 1797 |
| 3 | Arunachal Pradesh | 41 |
| 4 | Assam | 873 |
| 5 | Bihar | 7859 |
| 6 | Chandigarh | 165 |
| 7 | Dadra and Nagar Haveli and Daman and Diu | 3 |
| 8 | Delhi | 48 |
| 9 | Goa | 183 |
| 10 | Gujarat | 47 |
| 11 | Haryana | 42 |
| 12 | Himachal Pradesh | 18 |
| 13 | Jammu and Kashmir | 14 |
| 14 | Jharkhand | 5197 |
| 15 | Kerala | 177 |
| 16 | Madhya Pradesh | 330 |
| 17 | Maharashtra | 457 |
| 18 | Manipur | 8 |
| 19 | Meghalaya | 19 |
| 20 | Mizoram | 1 |
| 21 | Nagaland | 4 |
| 22 | Odisha | 3059 |
| 23 | Puducherry | 6 |
| 24 | Punjab | 62 |
| 25 | Rajasthan | 520 |
| 26 | Sikkim | 3 |
| 27 | Tamil Nadu | 1525 |
| 28 | Telangana | 219 |
| 29 | Tripura | 51 |
| 30 | Uttar Pradesh | 3215 |
| 31 | Uttarakhand | 53 |
| 32 | West Bengal | 8603 |
| | **Grand Total** | **34604** |

# ಅನುಬಂಧ -2

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1618 (1370) ಕ್ಕೆ

### ಮಂಡಳಿಯ ವತಿಯಿಂದ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೇನಿಂಗ್ – ಕಮ್ - ಟೂಲ್ ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
7. **ಟ್ರೇನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.20,000/- ವರೆಗೆ.**
8. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
9. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
10. **ಅಂತ್ಯಕ್ರಿಯೆ ವೆಚ್ಚ: ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/-** ಸಹಾಯಧನ.

| ಕ್ರ. ಸಂ. | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| **1** | 1ನೇ ತರಗತಿಯಿಂದ 5ನೇ ತರಗತಿ | **1,800/-** | - |
| **2** | 6ನೇ ತರಗತಿಯಿಂದ 8ನೇ ತರಗತಿ | **2,400/-** | - |
| **3** | 9 ಮತ್ತು 10ನೇ ತರಗತಿ | **3,000/-** | - |
| **4** | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | **6,000/-** | - |
| **5** | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | **10,000/-** | - |
| **6** | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | **12,000/-** | - |
| **7** | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | **15,000/-** | **20,000/-** |
| **8** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | **20,000/-** | **25,000/-** |
| **9** | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **10** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | **20,000/-** | **25,000/-** |

| | | | |
|---|---|---|---|
| **11** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **12** | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | **40,000/-** | **50,000/-** |
| **13** | ಪಿಹೆಚ್‌ಡಿ/ಎಂಫಿಲ್ (03 ವರ್ಷ ಅವಧಿಯವರೆಗೆ) | **40,000/-** | - |
| **14** | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | **50,000/-** | **60,000/-** |

11. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**
12. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**
13. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತಚಿಕಿತ್ಸೆ, ಗರ್ಭಕೋಶ ಶಸ್ತಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔಧ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
14. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**
15. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/- ಗಳ** ಸಹಾಯಧನ.

# ಅನುಬಂಧ -3

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1618 (1370)

**ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ನೋಂದಾಯಿತರಾದ ಹೊರ ರಾಜ್ಯದ ಅಸಂಘಟಿತ ಕಾರ್ಮಿಕರ ಜಿಲ್ಲಾವಾರು ವಿವರ**

| State and District | Total |
|---|---|
| **Andhra Pradesh** | **114** |
| BALLARY | 1 |
| BANGALORE RURAL | 8 |
| BANGALORE URBAN | 105 |
| **Assam** | **296** |
| BANGALORE RURAL | 25 |
| BANGALORE URBAN | 266 |
| CHIKBALLAPUR | 1 |
| DAKSHINA KANNADA | 4 |
| KOPPAL | 0 |
| **Bihar** | **192** |
| BANGALORE RURAL | 7 |
| BANGALORE URBAN | 184 |
| BELAGAVI | 0 |
| CHIKBALLAPUR | 1 |
| **Chandigarh** | **1** |
| BANGALORE URBAN | 1 |
| **Chhattisgarh** | **2** |
| BANGALORE URBAN | 2 |
| **Delhi** | **2** |
| BANGALORE RURAL | 1 |
| BANGALORE URBAN | 1 |
| **Goa** | **0** |
| UDUPI | 0 |
| **Gujarat** | **4** |
| BANGALORE URBAN | 3 |
| DAKSHINA KANNADA | 1 |
| **Haryana** | **5** |
| BANGALORE URBAN | 5 |
| **Jammu Kashmir** | **4** |
| BANGALORE URBAN | 4 |
| **Jharkhand** | **38** |
| BANGALORE RURAL | 3 |
| BANGALORE URBAN | 35 |
| BELAGAVI | 0 |
| **Karnataka** | **28** |
| BANGALORE URBAN | 28 |
| CHIKMAGALUR | 0 |
| KALABURGI | 0 |
| **Kerala** | **22** |

| | |
|---|---|
| BANGALORE URBAN | 9 |
| CHITRADURGA | 1 |
| DAKSHINA KANNADA | 11 |
| UDUPI | 1 |
| **Madhya Pradesh** | **9** |
| BANGALORE URBAN | 9 |
| **Maharashtra** | **13** |
| BANGALORE RURAL | 3 |
| BANGALORE URBAN | 5 |
| BELAGAVI | 2 |
| KALABURGI | 2 |
| TUMKUR | 0 |
| VIJAYAPURA | 1 |
| **Manipur** | **5** |
| BANGALORE URBAN | 5 |
| **Nagaland** | **5** |
| BANGALORE URBAN | 5 |
| **Odisha** | **275** |
| BANGALORE RURAL | 16 |
| BANGALORE URBAN | 258 |
| DAKSHINA KANNADA | 1 |
| **Punjab** | **3** |
| BANGALORE URBAN | 3 |
| **Rajasthan** | **11** |
| BANGALORE RURAL | 2 |
| BANGALORE URBAN | 9 |
| **Sikkim** | **1** |
| BANGALORE URBAN | 1 |
| **Tamil Nadu** | **42** |
| BANGALORE RURAL | 1 |
| BANGALORE URBAN | 40 |
| DAKSHINA KANNADA | 1 |
| **Telangana** | **4** |
| BANGALORE URBAN | 3 |
| UDUPI | 1 |
| **Tripura** | **45** |
| BANGALORE RURAL | 2 |
| BANGALORE URBAN | 43 |
| **Uttar Pradesh** | **55** |
| BANGALORE RURAL | 5 |
| BANGALORE URBAN | 49 |
| DAKSHINA KANNADA | 1 |
| **Uttarakhand** | **4** |
| BANGALORE URBAN | 4 |
| BELAGAVI | 0 |
| **West Bengal** | **136** |
| BANGALORE RURAL | 5 |
| BANGALORE URBAN | 131 |
| BELAGAVI | 0 |
| **Grand Total** | **1316** |